ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	15(128)
ಮಾನ್ಯ ಸದಸ್ಯರ ಹೆಸರು	ಶ್ರೀ. ಎನ್.ಎಸ್.ಬೋಸರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	02-03-2020
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳು ಎಷ್ಟು; ಸದರಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;</td><td>
ರಾಯಚೂರು ಜಿಲ್ಲೆಯ ಪ್ರಾಥಮಿಕ/ಸಮುದಾಯ ಆರೋಗ್ಯ ಕೇಂದ್ರಗಳಲ್ಲಿನ ಹುದ್ದೆಗಳ ವಿವರ ಈ ಕೆಳಗಿನಂತಿದೆ:
<table>
<tr><th></th><th>ಮಂಜೂರು</th><th>ಕಾರ್ಯನಿರತ</th><th>ಗುತ್ತಿಗೆ</th><th>ಖಾಲಿ</th></tr>
<tr><td>ಪ್ರಾಥಮಿಕ ಆರೋಗ್ಯ ಕೇಂದ್ರ</td><td>57</td><td>30</td><td>18</td><td>9</td></tr>
<tr><td>ಸಮುದಾಯ ಅರೋಗ್ಯ ಕೇಂದ್ರ</td><td>30</td><td>9</td><td>6</td><td>15</td></tr>
</table>
<u>ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ ಕ್ರಮಗಳು:-</u>

1. ತಜ್ಞ ವೈದ್ಯರನ್ನು "On Call Basis" ಮೇಲೆ ತೆಗೆದುಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ:ಆಕುಕ 178 ಹೆಚ್‌ಎಸ್‌ಹೆಚ್ 2011, ದಿನಾಂಕ: 20-05-2016ರಲ್ಲಿ ಆಯಾ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು ಜಿಲ್ಲಾಧಿಕಾರಿಗಳ ಸಹಮತಿ ಪಡೆದು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

2. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಸರ್ಕಾರಿ ಆದೇಶ ಸಂಖ್ಯೆ: ಆಕುಕ 297 ಹೆಚ್‌ಎಸ್‌ಹೆಚ್ 2015, ದಿನಾಂಕ:22-04-2016 ಹಾಗೂ ಆಕುಕ 359 ಹೆಚ್‌ಎಸ್‌ಹೆಚ್ 2016, ದಿನಾಂಕ:01-08-2016ರಲ್ಲಿ ಅನುಮತಿ ನೀಡಲಾಗಿದೆ.

3. ಎಂಬಿಬಿಎಸ್ ಪದವಿ ಹೊಂದಿದ ವೈದ್ಯ ಅಭ್ಯರ್ಥಿಗಳು ಲಭ್ಯವಿಲ್ಲದೆ ಇದ್ದ ಪಕ್ಷದಲ್ಲಿ ಸದರಿ ಹುದ್ದೆಯ ಎದುರು ಗುತ್ತಿಗೆ ಆಯುಷ್ ವೈದ್ಯರನ್ನು ಆಯಾ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು ಜಿಲ್ಲಾಧಿಕಾರಿಗಳ ಸಹಮತಿ ಪಡೆದು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

4. ಹಾಗೆಯೇ ಖಾಲಿ ಇರುವ ತಜ್ಞರು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹಾಗೂ ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ನಿಯಮ-2019ರ ಮೂಲಕ ಭರ್ತಿ ಮಾಡಲು ದಿನಾಂಕ: 06-02-2020ರ ಕರ್ನಾಟಕ ರಾಜ್ಯ ಪತ್ರದಲ್ಲಿ ಕರಡು ನಿಯಮಗಳನ್ನು ಪ್ರಕಟಿಸಿದ್ದು, ಅಂತಿಮ ನಿಯಮಗಳನ್ನು ಹೊರಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ.
</td></tr>
</table>

(ಆ)	ರಾಯಚೂರು ಜಿಲ್ಲೆಯಲ್ಲಿ ಅಂಬುಲೆನ್ಸ್‌ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ರಾಯಚೂರು ಜಿಲ್ಲೆಯಲ್ಲಿ ಅಂಬ್ಯುಲೆನ್ಸ್ ಕೊರತೆಯ ಬಗ್ಗೆ ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. ರಾಯಚೂರು ಜಿಲ್ಲೆಯಲ್ಲಿ ಈಗಾಗಲೇ 108 ಆರೋಗ್ಯ ಕವಚದಡಿಯಲ್ಲಿ, 23 ಅಂಬ್ಯುಲೆನ್ಸ್‌ಗಳು ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದ ಆಸ್ಪತ್ರೆಗಳಲ್ಲಿ 22 ಅಂಬ್ಯುಲೆನ್ಸ್‌ಗಳು ಇದ್ದು, ಜಿಲ್ಲೆಯಲ್ಲಿ ಒಟ್ಟು 45 ಅಂಬ್ಯುಲೆನ್ಸ್‌ಗಳು ಲಭ್ಯವಿರುತ್ತವೆ. ರಾಯಚೂರು ಜಿಲ್ಲೆಯ ಜನಸಂಖ್ಯೆ ಅಂದಾಜು 20.00 ಲಕ್ಷ ಇದ್ದು, ವಿಶ್ವ ಆರೋಗ್ಯ ಸಂಸ್ಥೆಯ ಮಾನದಂಡದಂತೆ ಒಂದು ಲಕ್ಷ ಜನಸಂಖ್ಯೆಗೆ ಒಂದು ಅಂಬ್ಯುಲೆನ್ಸ್ ಲಭ್ಯತೆ ಆಧಾರದ ಮೇಲೆ, ಜಿಲ್ಲೆಯಲ್ಲಿ 45000 ಜನಸಂಖ್ಯೆಗೆ ಒಂದರಂತೆ ಅಂಬ್ಯುಲೆನ್ಸ್‌ಗಳು ಲಭ್ಯವಿರುತ್ತವೆ. ಹಳೆಯ ಕೆಲವು ಅಂಬ್ಯುಲೆನ್ಸ್‌ಗಳನ್ನು ಬದಲಾವಣೆ ಮಾಡುವ ಉದ್ದೇಶದಿಂದ ಅನುದಾನ ಲಭ್ಯತೆಯ ಆಧಾರದ ಮೇಲೆ ಹೊಸ 08 ಅಂಬ್ಯುಲೆನ್ಸ್ ಖರೀದಿಗೆ ಅವಶ್ಯಕ ಕ್ರಮ ವಹಿಸಲಾಗುವುದು.

ಸಂ: ಆಕುಕ 03 ಹೆಚ್ ಎಸ್ ಐ 2020

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ

ವರ್ಗಗಳ ಕಲ್ಯಾಣ ಸಚಿವರು